ಇದು ಮಾಯ-ಮಾಟವೇ? ನಾನು ಇಲ್ಲಿಗೆ ನನ್ನ ಭಾಷಣವನ್ನು ನಿಲ್ಲಿಸಿ, ನಾಳೆ ಮುಂದುವರೆಸುತ್ತೇನೆ.

ಉಪಾಧ್ಯಕ್ಷರು: ಈಗ ಸದನವು ನಾಳೆ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮಾಡಲಾಗಿದೆ.

(ಸದನವು ಸಂಜೆ 4 ಗಂಟೆ 20 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನ: ದಿನಾಂಕ 01ನೇ ಮಾರ್ಚ್, 2011ರ ಮಂಗಳವಾರದಂದು ಬೆಳಿಗ್ಗೆ 11.00 ಗಂಟೆಗೆ ಸೇರಲು ನಿಶ್ಚಯಿಸಿತು)

7. ಅನುಬಂಧ–I

ಅಂತರ್ಜಲ ಮಟ್ಟ ಸುಧಾರಣೆ

32(331) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲಾ ವ್ಯಾಪ್ತಿಯಲ್ಲಿನ ಅಂತರ್ಜಲ ಮಟ್ಟದ ಸುಧಾರಣೆಗಾಗಿ ಸರ್ಕಾರದಯೋಜನೆಗಳೇನು; (ತಾಲ್ಲೂಕುವಾರು ವಿವರ ನೀಡುವುದು);

ಆ) ಮುದ್ದೇಬಿಹಾಳ ಮತ ಕ್ಷೇತ್ರದ ವ್ಯಾಪ್ತಿಯ ಬೋರ್‌ವೆಲ್‌ಗಳಲ್ಲಿ ಹಾಗೂ ತೆರೆದ ಬಾವಿಗಳಲ್ಲಿ ಅಂತರ್ಜಲ ಮಟ್ಟದ ಕುಸಿತದಿಂದಾಗಿ ನೀರು ಲಭ್ಯವಾಗದೆ ನೀರಾವರಿ ಹಾಗೂ ಕುಡಿಯುವ ನೀರಿಗಾಗಿ ಜನರು ತೀವ್ರ ಸಂಕಷ್ಟವನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ನೀರಿನ ಲಭ್ಯತೆಯ ಕೊರತೆಯಿಂದಾಗಿ ಬೆಲೆ ನಾಶವನ್ನು ಅನುಭವಿಸಿದ ರೈತರುಗಳಿಗೆ ಸರ್ಕಾರ ಪರಿಹಾರ ನೀಡಿದೆಯೇ?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು)

ಅ) ಬಿಜಾಪುರ ಜಿಲ್ಲಾ ವ್ಯಾಪ್ತಿಯಲ್ಲಿನ ಅಂತರ್ಜಲ ಮಟ್ಟ ಸುಧಾರಣೆಗಾಗಿ ಎನ್‌ಡಬ್ಲ್ಯೂಡಿಪಿಆರ್‌ಎ, ಡಿಪಿಎಪಿ, ಐಡಬ್ಲ್ಯೂಡಿಪಿ, ಆರ್‌ಕೆವಿವೈ, ಆರ್‌ಎಸ್‌ವಿವೈ, ಆರ್‌ವಿಪಿ ಮುಂತಾದ ಯೋಜನೆಗಳನ್ನು ವಿವಿಧ ಇಲಾಖೆಗಳು ಅನುಷ್ಠಾನಗೊಳಿಸುತ್ತಿವೆ. ಇದಲ್ಲದೆ ಸಣ್ಣ ನೀರಾವರಿ ಇಲಾಖೆಯಿಂದ ಕೆರೆ,

ಬ್ಯಾರೇಜು, ಚೆಕ್ ಡ್ಯಾಂ ಮುಂತಾದ ಕಾಮಗಾರಿಗಳನ್ನು ಕೈಗೊಂಡಿದ್ದು, ಇವುಗಳಲ್ಲಿ ಸಂಗ್ರಹವಾಗುವ ನೀರಿನಿಂದ ಪರೋಕ್ಷವಾಗಿ ಅಂತರ್ಜಲ ಅಭಿವೃದ್ಧಿಯಾಗುತ್ತಿದೆ.

ಆ) ಮಾರ್ಚ್ 2009ರ ಅಂತ್ಯಕ್ಕೆ ಅಂತರ್ಜಲ ಸಂಪನ್ಮೂಲವನ್ನು ಮೌಲೀಕರಣ ಮಾಡಿದಂತೆ ಮುದ್ದೇಬಿಹಾಳ ತಾಲ್ಲೂಕನ್ನು ಅರೆ ಕ್ಲಿಷ್ಟಕರ (ಅಂತರ್ಜಲ ಬಳಕೆ ಮರು ಪೂರ್ಣದ ಶೇ. 70–90) ಎಂದು ವರ್ಗೀಕರಿಸಿದೆ. ತಾಲ್ಲೂಕಿನ ಅಚ್ಚುಕಟ್ಟು ಪ್ರದೇಶ ಹೊರಡಿಸಿ ಕೆಲವು ಭಾಗಗಳಲ್ಲಿ ಗಮನಕ್ಕೆ ಬಂದಿದೆ.

ಇ) ಅಂತರ್ಜಲ ಮಟ್ಟ ಸುಧಾರಣೆ ಹಾಗೂ ಅತಿ ಬಳಕೆ ನಿಯಂತ್ರಿಸಲು ಇಲಾಖೆಯು ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕ 2010ಕ್ಕೆ ಸಚಿವ ಸಂಪುಟದ ಅನುಮೋದನೆ ದೊರೆತಿರುತ್ತದೆ. ವಿಧಾನ ಮಂಡಲದ ಅನುಮೋದನೆ ಪಡೆದ ನಂತರ ನೂತನವಾಗಿ ರಚಿತವಾಗುವ ಕರ್ನಾಟಕ ಅಂತರ್ಜಲ ಪ್ರಾಧಿಕಾರವು ಈ ನಿಟ್ಟಿನಲ್ಲಿ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ಅಂತರ್ಜಲ ಮಟ್ಟ ಕುಸಿತ ನಿಯಂತ್ರಿಸಲು, ಸಣ್ಣ ನೀರಾವರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕೃಷಿ ಮತ್ತಿತರ ಇಲಾಖೆಗಳು ಕೆರೆ, ಬ್ಯಾರೇಜ್, ಚೆಕ್‌ಡ್ಯಾಂ ತಡೆಗೋಡೆ, ನಾಲಾಬಂದ್, ಗಲ್ಲಿ ಪ್ಲಗ್ ಮುಂತಾದ ಅಂತರ್ಜಲ ಕೃತಕ ಮರು ಪೂರೈಕೆ ರಚನೆಗಳ ನಿರ್ಮಾಣ ಮಾಡಿ ಅಂತರ್ಜಲ ಮಟ್ಟ ಹೆಚ್ಚಳ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಪರಿಹಾರ ನೀಡಿರುವುದಿಲ್ಲ.

ಪ್ರಾಣಿ ಸಂಗ್ರಹಾಲಯ

33(332) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪ್ರಾಣಿ ಸಂಗ್ರಹಾಲಯಗಳ ಸಂಖ್ಯೆ ಎಷ್ಟು;

ಆ) ಪ್ರಾಣಿ ಸಂಗ್ರಹಾಲಯಗಳು ಇರುವ ಸ್ಥಳಗಳು ಯಾವುವು;